ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 440 ಗ್ರಾಪಂಅ 2015.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01.02.2016

# ಸುತ್ತೋಲೆ

ವಿಷಯ: ಗ್ರಾಮ ಪಂಚಾಯತ್ ನಿಧಿಯಲ್ಲಿ ಶೇ.25 ಕ್ಕಿಂತ ಕಡಿಮೆ ಇರದಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗೆ ಬಳಸಲು ಹೆಚ್ಚುವರಿ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಉಲ್ಲೇಖ:
1. ಸಮಸಂಖ್ಯೆಯ ಸುತ್ತೋಲೆ, ದಿನಾಂಕ 22.07.2015
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 130 ಗ್ರಾಪಂಅ 2003, ದಿನಾಂಕ 30.04.2003

***

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 213 ರಡಿ ಗ್ರಾಮ ಪಂಚಾಯತಿಗೆ ಎಲ್ಲಾ ಮೂಲಗಳಿಂದ ಲಭ್ಯವಾಗುವ ಅನುದಾನಗಳಲ್ಲಿ ಶೇಖಡ 25 ಕ್ಕಿಂತ ಕಡಿಮೆ ಇಲ್ಲದಂತೆ ಅನುದಾನವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ವಿನಿಯೋಗಿಸಲು ಮಾರ್ಗಸೂಚಿಗಳನ್ನು ಈಗಾಗಲೇ ಉಲ್ಲೇಖ (1) ರ ಸುತ್ತೋಲೆಯಲ್ಲಿ ಹೊರಡಿಸಲಾಗಿದೆ.

ಉಲ್ಲೇಖ (1) ರ ಸುತ್ತೋಲೆಯಲ್ಲಿ ನೀಡಿರುವ ಮಾರ್ಗಸೂಚಿಗಳಲ್ಲದೆ, ಪ್ರದೇಶಿಕ ಭಿನ್ನತೆಯ ಕಾರಣದಿಂದ ಇನ್ನಾವುದೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಲ್ಯಾಣ ಕಾರ್ಯಕ್ರಮಗಳು ಮುಖ್ಯವೆನಿಸಿದಲ್ಲಿ ಗ್ರಾಮ ಪಂಚಾಯಿತಿಗಳು ತಮ್ಮ ತಮ್ಮ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ನಿರ್ಣಯಿಸಿ, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿದಲ್ಲಿ ಅವುಗಳನ್ನು ಸಹ ಪರಿಗಣಿಸಲು ಅಗತ್ಯ ಸುತ್ತೋಲೆಯನ್ನು ಹೊರಡಿಸಲಾಗುವುದೆಂದು ತಿಳಿಸಲಾಗಿತ್ತು. ಅದರಂತೆ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಲ್ಲಿಸಿರುವ ಪ್ರಸ್ತಾವನೆಗಳನ್ನು ಪರಿಗಣಿಸಿ, ಉಲ್ಲೇಖ (1) ರ ಸುತ್ತೋಲೆಯಲ್ಲಿ ನೀಡಿರುವ ಮಾರ್ಗಸೂಚಿಗಳಲ್ಲದೆ, ಈ ಕೆಳಕಂಡ ಮಾರ್ಗಸೂಚಿಗಳಂತೆಯೂ ಸಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಮೀಸಲಿರಿಸಿದ ಅನುದಾನವನ್ನು ವಿನಿಯೋಗಿಸಬಹುದು.

1. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವರ್ಗದ ವಿದ್ಯಾರ್ಥಿಗಳಿಗೆ ಓದುವ ಕಲಿಕಾ ಸಾಮಗ್ರಿಗಳು ಹಾಗೂ ಪುಸ್ತಕಗಳನ್ನು ಹೊರತುಪಡಿಸಿ, ರೀಡಿಂಗ್ ಟೇಬಲ್, ಹೆಚ್ಚುವರಿ ಸಮವಸ್ತ್ರ, ಬ್ಯಾಗ್, ಕೊಡೆ ಇತ್ಯಾದಿಗಳಿಗಾಗಿ ಗರಿಷ್ಟ ರೂ.1,000/- ರಂತೆ ಪ್ರತಿ ವಿದ್ಯಾರ್ಥಿಗೆ ಒಮ್ಮೆ ಸಹಾಯಧನ ನೀಡಬಹುದು.
2. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ವರ್ಗದವರು ರಸ್ತೆ ಹಾಗೂ ಇನ್ನಿತರೆ ಅಪಘಾತಕ್ಕೊಳಗಾದ ಪ್ರಕರಣಗಳಲ್ಲಿ ಚಿಕಿತ್ಸೆಗಾಗಿ ಗರಿಷ್ಟ ರೂ.5,000/- ಸಹಾಯಧನ ನೀಡಬಹುದು.
3. ದೀರ್ಘಕಾಲದ ಕಾಯಿಲೆಗಳಿಂದ ಬಳಲುತ್ತಿರುವ ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರು ಸಕಾರಣಗಳಿಂದ ಸರ್ಕಾರೇತರ ಆಸ್ಪತ್ರೆಗಳಲ್ಲಿ ಚಿಕಿತ್ಸೆಗಾಗಿ ದಾಖಲಾದ ಪ್ರಕರಣಗಳಿಗೆ ರೂ.3,000/- ರಂತೆ ಸಹಾಯಧನ ನೀಡಬಹುದು.



Scanned by CamScanner

4. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರು ಸ್ವತಃ ನಿರ್ಮಿಸಿಕೊಂಡ ಹಾಗೂ ವಿವಿಧ ಯೋಜನೆಗಳಡಿ ನಿರ್ಮಿಸಿದ ದುರಸ್ಥಿಗಾಗಿ(ಮನೆ ನಿರ್ಮಿಸಿ ಕನಿಷ್ಟ ಹತ್ತು ವರ್ಷ ನಂತರ) ರೂ.15,000/- ಸಹಾಯ ಧನ ನೀಡಬಹುದು.
5. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ವಿದ್ಯುತ್ ಸಂಪರ್ಕಗಳನ್ನು ಭಾಗ್ಯ ಜ್ಯೋತಿ, ಕುಟೀರ ಜ್ಯೋತಿ, ಆರ್.ಜಿ.ಎಚ್.ಸಿ.ಎಲ್., ಯೋಜನೆಯಡಿ ಒಂದು ಪಾಯಿಂಟ್ ಮಾತ್ರ ನೀಡುತ್ತಿದ್ದು, ಹೆಚ್ಚುವರಿ ವಿಸ್ತರಣೆಗಾಗಿ ರೂ.4,000/- ಸಹಾಯ ಧನವನ್ನು ಕುಟುಂಬಕ್ಕೆ ಒಂದು ಬಾರಿಗೆ ನೀಡಬಹುದು.
6. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಹೆಣ್ಣು ಮಕ್ಕಳ ಸರಳ ಮದುವೆಗೆ ರೂ.2,000/- ಸಹಾಯಧನ ನೀಡಬಹುದು.
7. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರ ಶವ ಸಂಸ್ಕಾರಕ್ಕೆ ರೂ.1,000/- ಸಹಾಯಧನ ನೀಡಬಹುದು.
8. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ನಲ್ಲಿ ನೀರು ಸಂಪರ್ಕದ ಮೀಟರ್ ಅಳವಡಿಕೆಗೆ ಹಾಗೂ ಖಾಸಗಿ ನಲ್ಲಿ ನೀರು ಪಡೆಯಲು ಗ್ರಾಮ ಪಂಚಾಯತಿಗೆ ಪಾವತಿಸುವ ವಾಸ್ತವಿಕ ಠೇವಣಿ ರೂ.1,000/-ಮೊತ್ತವನ್ನು ಸಹಾಯಧನವನ್ನಾಗಿ ನೀಡಬಹುದು.
9. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರು ರೂ.2,500/- ಗಳಿಗಿಂತ ಕಡಿಮೆ ಸಹಾಯಧನ ಪಡೆದು ನಿರ್ಮಿಸಿದ ಶೌಚಾಲಯ ದುರಸ್ಥಿಗಾಗಿ ಕನಿಷ್ಟ ರೂ. 5,000/- ಗಳವರೆಗೆ ಒಂದು ಬಾರಿಗೆ ಸಹಾಯಧನ ನೀಡಬಹುದು.
10. ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಮಕ್ಕಳಿಗೆ ಲಸಿಕೆ ಅಳವಡಿಕೆಗಾಗಿ (ಸರ್ಕಾರದಿಂದ ಉಚಿತವಾಗಿ ಅಳವಡಿಸುವ ಲಸಿಕೆಗಳನ್ನು ಹೊರತುಪಡಿಸಿ) ವಾಸ್ತವ ವೆಚ್ಚವನ್ನು ಸಹಾಯಧನವನ್ನಾಗಿ ನೀಡಬಹುದು.

(ಕೆ.ಯಾಲಕ್ಕಿಗೌಡ) 1/2/16
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:
1. ಎಲ್ಲಾ ಜಿಲ್ಲಾಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ. (ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ಗೆ ಅಳವಡಿಸಲು.
5. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
6. ಕಛೇರಿ ಪ್ರತಿ / ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ :
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.



Scanned by CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 440 ಗ್ರಾಪಂಅ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 31.01.2017

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿ ನಿಧಿಯಲ್ಲಿ ಶೇ.25 ಕ್ಕಿಂತ ಕಡಿಮೆ ಇರದಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗೆ ವಿನಿಯೋಗಿಸಲು ಹೆಚ್ಚುವರಿ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 130 ಗ್ರಾಪಂಅ 2003, ದಿನಾಂಕ 30.04.2003
2) ಸಮಸಂಖ್ಯೆಯ ಸುತ್ತೋಲೆ, ದಿನಾಂಕ 22.07.2015
3) ಸಮಸಂಖ್ಯೆಯ ಸರ್ಕಾರದ ಸುತ್ತೋಲೆ, ದಿನಾಂಕ 01.02.2016

***

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 213 ರಡಿ ಗ್ರಾಮ ಪಂಚಾಯತಿಗಳಿಗೆ ಎಲ್ಲಾ ಮೂಲಗಳಿಂದ ಲಭ್ಯವಾಗುವ ಅನುದಾನಗಳಲ್ಲಿ ಶೇ.25 ಕ್ಕಿಂತ ಕಡಿಮೆ ಇಲ್ಲದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ವಿನಿಯೋಗಿಸುವ ಬಗ್ಗೆ ಮಾರ್ಗಸೂಚಿಗಳನ್ನು ಉಲ್ಲೇಖಿತ ಸರ್ಕಾರದ ಸುತ್ತೋಲೆಗಳಲ್ಲಿ ಹೊರಡಿಸಲಾಗಿದೆ.

ಉಲ್ಲೇಖ (3) ರ ಸುತ್ತೋಲೆಗಳಲ್ಲಿ ವಿವರಿಸಿರುವ ಮಾರ್ಗಸೂಚಿಗಳಲ್ಲಿನ ಕ್ರಮಸಂಖ್ಯೆ (6) ಮತ್ತು (7) ಗಳನ್ನು ಪರಿಷ್ಕರಿಸಿ ಕೆಳಕಂಡಂತೆ ನಿರ್ಧಿಷ್ಟಪಡಿಸಲಾಗಿದೆ.

1) ಗ್ರಾಮ ಪಂಚಾಯತಿ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಹೆಣ್ಣುಮಕ್ಕಳ ಸರಳ ಮದುವೆಗೆ ರೂ.5,000/- ಸಹಾಯಧನ ನೀಡಬಹುದು.
2) ಗ್ರಾಮ ಪಂಚಾಯತಿ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಶವ ಸಂಸ್ಕಾರಕ್ಕೆ ರೂ.5,000/- ಸಹಾಯಧನ ನೀಡಬಹುದು.

ಮುಂದುವರೆದು, ಉಲ್ಲೇಖಿತ ಸುತ್ತೋಲೆಗಳಲ್ಲಿ ವಿವರಿಸಿರುವ ಮಾರ್ಗಸೂಚಿಗಳ ಜೊತೆಗೆ, ಗ್ರಾಮ ಪಂಚಾಯತಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಮೀಸಲಿರಿಸಿರುವ ಶೇ.25 ರ ಅನುದಾನವನ್ನು ಕೆಳಕಂಡ ಉದ್ದೇಶಕ್ಕೂ ಉಪಯೋಗಿಸಬಹುದಾಗಿದೆ.

1) ಗ್ರಾಮ ಪಂಚಾಯತಿ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ನಿಯಮ 94ಸಿ ಹಾಗೂ ಫಾರ್ಮ್-50, 53 ಪ್ರಕರಣಗಳಲ್ಲಿ ಭರಿಸಬೇಕಾದ ವಾಸ್ತವ ಶುಲ್ಕವನ್ನು ಪಾವತಿಸುವುದು.

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**
1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5) ಸಂಪಾದಕರು, ಕರ್ನಾಟಕ ವಿಕಾಸ - ಪ್ರಕಟಣೆಗಾಗಿ.
6) ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**
1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

Scanned by CamScanner

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 440 ಗ್ರಾಪಂಅ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 13.03.2017

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿ ನಿಧಿಯಲ್ಲಿ ಶೇ.25 ಕ್ಕಿಂತ ಕಡಿಮೆ ಇರದಷ್ಟು ಮೊತ್ತವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗೆ ವಿನಿಯೋಗಿಸಲು ಹೆಚ್ಚುವರಿ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 130 ಗ್ರಾಪಂಅ 2003, ದಿನಾಂಕ 30.04.2003
2) ಸಮಸಂಖ್ಯೆಯ ಸರ್ಕಾರದ ಸುತ್ತೋಲೆ, ದಿನಾಂಕ 22.07.2015
3) ಸಮಸಂಖ್ಯೆಯ ಸರ್ಕಾರದ ಸುತ್ತೋಲೆ, ದಿನಾಂಕ 01.02.2016
4) ಸಮಸಂಖ್ಯೆಯ ಸರ್ಕಾರದ ಸುತ್ತೋಲೆ, ದಿನಾಂಕ 31.01.2017
5) ಶ್ರೀ ರಮೇಶ್ ಕೋಟ್ಯಾನ್ ಕೆಳಾರ್ಕಳಬೆಟ್ಟು, ಜಿಲ್ಲಾ ಸಂಚಾಲಕರು, ಕರ್ನಾಟಕ ದಲಿತ ಸಂಘರ್ಷ ಸಮಿತಿ(ರಿ.), ಉಡುಪಿ ಜಿಲ್ಲೆ ಇವರ ಮನವಿ, ದಿನಾಂಕ 19.12.2016

***

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 213 ರಡಿ ಗ್ರಾಮ ಪಂಚಾಯತಿಗಳಿಗೆ ಎಲ್ಲಾ ಮೂಲಗಳಿಂದ ಲಭ್ಯವಾಗುವ ಅನುದಾನಗಳಲ್ಲಿ ಶೇ.25 ಕ್ಕಿಂತ ಕಡಿಮೆ ಇಲ್ಲದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ವಿನಿಯೋಗಿಸುವ ಬಗ್ಗೆ ಮಾರ್ಗಸೂಚಿಗಳನ್ನು ಉಲ್ಲೇಖಿತ ಸರ್ಕಾರದ ಸುತ್ತೋಲೆಗಳಲ್ಲಿ ಹೊರಡಿಸಲಾಗಿದೆ.

ಮುಂದುವರೆದು, ಉಲ್ಲೇಖಿತ ಸುತ್ತೋಲೆಗಳಲ್ಲಿ ವಿವರಿಸಿರುವ ಮಾರ್ಗಸೂಚಿಗಳ ಜೊತೆಗೆ, ಗ್ರಾಮ ಪಂಚಾಯತಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಮೀಸಲಿರಿಸಿರುವ ಶೇ.25 ರ ಅನುದಾನವನ್ನು ಕೆಳಕಂಡ ಉದ್ದೇಶಕ್ಕೂ ಉಪಯೋಗಿಸಬಹುದಾಗಿದೆ.

1) ಪರಿಶಿಷ್ಟ ಜಾತಿ ಮತ್ತು ಪಂಗಡದ ಪಂಗಡದ ವೈದ್ಯಕೀಯ, ನರ್ಸಿಂಗ್, ಇಂಜಿನಿಯರಿಂಗ್, ಎಂ.ಬಿ.ಎ., ವೃತ್ತಿಪರ ಶಿಕ್ಷಣ/ಪದವಿ, ಸ್ನಾತಕೋತ್ತರ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಗರಿಷ್ಠ ಸಹಾಯಧನ ರೂ.25,000/- ರವರೆಗೆ ವಿದ್ಯಾರ್ಹತೆಗನುಗುಣವಾಗಿ ನೀಡಬಹುದು ಅಥವಾ ತಾಂತ್ರಿಕ/ವೈದ್ಯಕೀಯ ಶಿಕ್ಷಣ ವ್ಯಾಸಂಗ ಮಾಡುತ್ತಿರುವವರಿಗೆ ಲ್ಯಾಪ್‌ಟಾಪ್ ನೀಡಬಹುದು.
2) ಸರ್ಕಾರ ಹೆಸರಿಸಿದ ಪರಿಶಿಷ್ಟ ಜಾತಿ ಮತ್ತು ಪಂಗಡದ ಪಂಗಡದವರ ಆರೋಗ್ಯ ವಿಮಾ / ಆರೋಗ್ಯ ಯೋಜನೆಯ ವಾರ್ಷಿಕ ಪ್ರೀಮಿಯಂ ಕಂತಿನ ವಾಸ್ತವ ಮೊತ್ತವನ್ನು ಪಾವತಿಸಬಹುದು.

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**
1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5) ಸಂಪಾದಕರು, ಕರ್ನಾಟಕ ವಿಕಾಸ - ಪ್ರಕಟಣೆಗಾಗಿ.
6) ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**
1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

Scanned by CamScanner